ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	105
ಮಾನ್ಯ ಸದಸ್ಯರ ಹೆಸರು	ಶ್ರೀ ರಘುನಾಥ್ ರಾವ್ ಮಲ್ಕಾಪೂರೆ
ಉತ್ತರಿಸುವ ಸಚಿವರು	ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಉತ್ತರಿಸಬೇಕಾದ ದಿನಾಂಕ	21-09-2020

	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಕಳೆದ 3 ವರ್ಷಗಳಿಂದ ಯಾವ ಯಾವ ವಿಶ್ವವಿದ್ಯಾನಿಲಯಗಳಲ್ಲಿ ಅಕ್ರಮ ನೇಮಕಾತಿ, ಭ್ರಷ್ಟಾಚಾರ ಮತ್ತು ನಕಲಿ ಅಂಕಪಟ್ಟಿ ಪ್ರಕರಣಗಳು ಪತ್ತೆಯಾಗಿವೇ; (ಸಂಪೂರ್ಣ ಮಾಹಿತಿ ನೀಡುವುದು)	ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 19 ಸಾರ್ವಜನಿಕ ವಿಶ್ವವಿದ್ಯಾಲನಿಲಯಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಕ್ರಮ ನೇಮಕಾತಿ ಪ್ರಕರಣಗಳು ಹಾಗೂ ನಕಲಿ ಅಂಕಪಟ್ಟಿ ಪ್ರಕರಣಗಳು ನಡೆದಿರುವುದಿಲ್ಲ.
(ಆ)	ಹಾಗಿದ್ದಲ್ಲಿ, ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವವರು ಯಾರ್ಯಾರು; (ವಿಶ್ವವಿದ್ಯಾಲಯಗಳವಾರು ಮಾಹಿತಿ ಒದಗಿಸುವುದು)	ಆದರೆ ತುಮಕೂರು ವಿಶ್ವವಿದ್ಯಾಲಯದಲ್ಲಿ ಹೊರಗುತ್ತಿಗೆ ಆಧಾರದ ಸೇವೆಗಳನ್ನು ಒದಗಿಸುತ್ತಿರುವ ಕೆಲವು ಸಂಸ್ಥೆಗಳಿಗೆ Double Payment ಮಾಡಿರುವ ಬಗ್ಗೆ ರಾಜ್ಯ ಲೆಕ್ಕಪತ್ರ ಪರಿಶೋಧನೆ ಇಲಾಖೆಯು 2016ರಲ್ಲಿ ವರದಿ ನೀಡಿದ್ದು, ಅದರನ್ವಯ ಸದರಿ ಪ್ರಕರಣದಲ್ಲಿ ಭಾಗಿಯಾದ ಡಾ. ಬಿ.ಕೆ.ಸುರೇಶ್, ಸಹಾಯಕ ಪ್ರಾಧ್ಯಾಪಕರು, ವಾಣಿಜ್ಯ ಶಾಸ್ತ್ರ ವಿಭಾಗ ಇವರನ್ನು ದಿನಾಂಕ:27.06.2016ರಂದು ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಲಾಗಿತ್ತು. ಮುಂದುವರೆದು, ಸದರಿಯವರ ವಿರುದ್ಧ ತುಮಕೂರು ಹೊಸ ಬಡಾವಣೆ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್. ನ್ನು ದಾಖಲಿಸಲಾಗಿರುತ್ತದೆ. ಆದರೆ, ಸದರಿಯವರ ವಿರುದ್ಧದ ಆರೋಪಗಳ ಕುರಿತು ವಿಶ್ವವಿದ್ಯಾಲಯದಿಂದ ಇಲಾಖಾ ವಿಚಾರಣೆ ನಡೆಸಿ, ನ್ಯಾಯಾಲಯದ ಅಂತಿಮ ತೀರ್ಮಾನವನ್ನು ಕಾಯ್ದಿರಿಸಿ, ಅವರ ಎರಡು ವಾರ್ಷಿಕ ವೇತನಗಳನ್ನು ತಡೆಹಿಡಿದು, ಸೇವೆಯಿಂದ ಅಮಾನತ್ತುಗೊಳಿಸಿದ ಆದೇಶವನ್ನು ಹಿಂಪಡೆದು, ದಿನಾಂಕ:21.04.2017ರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಆದೇಶ ಹೊರಡಿಸಲಾಗಿದೆ.
(ಇ)	ನಕಲಿ ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ಧ ಸರ್ಕಾರವು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ವಿರುದ್ಧ ಯಾವ ಯಾವ ಶಿಸ್ತಿನ ಕ್ರಮಗಳನ್ನು ಹಾಗೂ ಯಾರ ಯಾರ ಮೇಲೆ ಮೊಕದ್ದಮೆಗಳನ್ನು ದಾಖಲಿಸಿದೆ; (ವಿವರ ನೀಡುವುದು)	
(ಈ)	ರಾಜ್ಯದ ವಿಶ್ವವಿದ್ಯಾಲಯಗಳನ್ನು ಭ್ರಷ್ಟಾಚಾರ ಮುಕ್ತ ಮತ್ತು ಪಾರದರ್ಶಕ ಆಡಳಿತ ನಡೆಸುವಂತೆ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?	ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳಲ್ಲಿ ಕುಲಸಚಿವರು (ಆಡಳಿತ)/ ಕುಲಸಚಿವರು (ಮೌಲ್ಯಮಾಪನ) ಹುದ್ದೆಗಳಿಗೆ ಬೋಧಕರ ವೃಂದದ ಪ್ರಾಧ್ಯಾಪಕರುಗಳನ್ನು ನೇಮಕ ಮಾಡಲಾಗುತ್ತಿರುವ ಕಾರಣ, ವಿಶ್ವವಿದ್ಯಾಲಯದ ಆಡಳಿತದಲ್ಲಿ ಹೆಚ್ಚಿನ ಅನುಭವದ ಕೊರತೆ ಉಂಟಾಗಿ, ಆಡಳಿತ ನಿರ್ವಹಣೆ ಕುಸಿಯುತ್ತಿರುವುದನ್ನು ಗಮನಿಸಿ, ರಾಜ್ಯದ ವಿಶ್ವವಿದ್ಯಾಲಯಗಳಿಗೆ ಅಖಿಲ ಭಾರತ ಸೇವೆಗೆ ಸೇರಿದ ಒಬ್ಬ ಅಧಿಕಾರಿಯನ್ನು ಅಥವಾ ಹಿರಿಯ ಶ್ರೇಣಿ ಮತ್ತು ಮೇಲಿನ

		ಗ್ರೂಪ್-ಎ ಅಧಿಕಾರಿಯ ದರ್ಜೆಗಿಂತ ಕಡಿಮೆ ಇಲ್ಲದ ಕರ್ನಾಟಕ ಆಡಳಿತ ಸೇವೆಗೆ ಸೇರಿದ ಒಬ್ಬ ಅಧಿಕಾರಿಯನ್ನು ವಿಶ್ವವಿದ್ಯಾಲಯದ ಕುಲಸಚಿವ (ಆಡಳಿತ) ಹುದ್ದೆಗೆ ನೇಮಕ ಮಾಡಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ಕ್ಕೆ ತಿದ್ದುಪಡಿ ಮಾಡಲಾಗಿದ್ದು, ಅದರನ್ವಯ ಈಗಾಗಲೇ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಐ.ಎ.ಎಸ್. ಶ್ರೇಣಿಯ ಅಧಿಕಾರಿಯನ್ನು, ಕರ್ನಾಟಕ ವಿಶ್ವವಿದ್ಯಾಲಯಕ್ಕೆ ಐ.ಎಫ್.ಎಸ್. ಶ್ರೇಣಿಯ ಅಧಿಕಾರಿಯನ್ನು ಹಾಗೂ ಮಂಗಳೂರು ಮತ್ತು ಬೆಂಗಳೂರು ಉತ್ತರ ವಿಶ್ವವಿದ್ಯಾಲಯಗಳಿಗೆ ಕೆ.ಎ.ಎಸ್. (ಹಿರಿಯ ಶ್ರೇಣಿ) ಅಧಿಕಾರಿಗಳನ್ನು ಕುಲಸಚಿವ (ಆಡಳಿತ) ಹುದ್ದೆಗೆ ನೇಮಕ ಮಾಡಲಾಗಿರುತ್ತದೆ. ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳ ಕಾಲೇಜುಗಳ ಸಂಯೋಜನಾ ಪ್ರಕ್ರಿಯೆಯನ್ನು ಸುಗಮ ಹಾಗೂ ಪಾರದರ್ಶಕವಾಗಿ ನಡೆಸುವ ಸಲುವಾಗಿ ಏಕರೂಪ ಮಾದರಿಯಲ್ಲಿ ಸ್ಥಳೀಯ ವಿಚಾರಣಾ ಸಮಿತಿ ವರದಿಯನ್ನು ಸಿದ್ಧಪಡಿಸಲು, ಆನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಇಡಿ 34 ಇಜಿಓವಿ 2020, ದಿನಾಂಕ:22.06.2020ರಲ್ಲಿ ಆದೇಶ ಹೊರಡಿಸಲಾಗಿರುತ್ತದೆ. ನೇರ ನೇಮಕಾತಿಯಲ್ಲಿ ಜರುಗಬಹುದಾದ ಅವ್ಯವಹಾರವನ್ನು ತಡೆಗಟ್ಟಲು ಸರ್ಕಾರದ ಆದೇಶ ಸಂ. ಇಡಿ 136 ಯುಎನ್ಇ 2017, ದಿನಾಂಕ:03.06.2019ರಲ್ಲಿ ವಿಶ್ವವಿದ್ಯಾಲಯಗಳಲ್ಲಿ ಬೋಧಕ ವೃಂದದ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಿಕೊಳ್ಳುವಂತೆ ಆದೇಶಿಸಲಾಗಿದೆ.

ಸಂಖ್ಯೆ: ಇಡಿ 267 ಯುಎನ್ಇ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)